**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **23** |
| 2) | ಮಾನ್ಯ ಸದಸ್ಯರ ಹೆಸರು | **ಶ್ರೀ ಯು.ಬಿ.ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು)** |
| 3) | ಉತ್ತರಿಸಬೇಕಾದ ದಿನಾಂಕ | **19-12-2022** |
| 4) | ಉತ್ತರಿಸುವವರು | **ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು** |

| ಪ್ರಶ್ನೆ | ಉತ್ತರ |
|---|---|
| (ಅ) 2020ನೇ ಸಾಲಿನಲ್ಲಿ ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಯಾದ ತರುವಾಯ ವಿದ್ಯಾರ್ಥಿಗಳಲ್ಲಿ ವೃತ್ತಿಪರ, ಉದ್ಯೋಗಾರ್ಹ, ಉದ್ಯಮಶೀಲ ಕೌಶಲ್ಯಗಳ ಬಗ್ಗೆ ಅರಿವು ಹೆಚ್ಚಾಗಿದೆಯೇ; | ಹೌದು<br>2020ನೇ ಸಾಲಿನಲ್ಲಿ ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಯ ನಂತರ ವಿದ್ಯಾರ್ಥಿಗಳಲ್ಲಿ ವೃತ್ತಿಪರ ಉದ್ಯೋಗಾರ್ಹ ಉದ್ಯಮಶೀಲ ಕೌಶಲ್ಯಗಳ ಬಗ್ಗೆ ಅರಿವು ಹೆಚ್ಚಿಸಲು ತಾಂತ್ರಿಕ ಶಿಕ್ಷಣಕ್ಕಾಗಿ ರಾಷ್ಟ್ರೀಯ ಮಂಡಳಿಯವರು (NSQF) ರೂಪಿಸಿರುವ ಪಠ್ಯಕ್ರಮದಲ್ಲಿ ಆಯಾ ಹಂತಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಗೆ ಪೂರಕವಾಗಿ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳ ಪಠ್ಯಕ್ರಮವನ್ನು ಈಗಾಗಲೇ ಅಳವಡಿಸಲಾಗಿದ್ದು, ಅದರನ್ವಯ ಸರ್ಕಾರಿ ಹಾಗೂ ಸರ್ಕಾರೇತರ ಸಂಸ್ಥೆಗಳ ಮೂಲಕ ವಿವಿಧ ತರಬೇತಿ ಕಾರ್ಯಕ್ರಮಗಳೊಂದಿಗೆ ಅರಿವು ಮೂಡಿಸಲಾಗುತ್ತಿದೆ. |
| (ಆ) ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳ ಪಾಲ್ಗೊಳ್ಳುವಿಕೆ, ಕಲಿಕೆಯ ಪ್ರಮಾಣ ಶೇಕಡವಾರು ಯಾವ ಹಂತದಲ್ಲಿ ಹೆಚ್ಚಾಗಿದೆ; | ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳ ಪಾಲ್ಗೊಳ್ಳುವಿಕೆ, ಕಲಿಕೆಯ ಪ್ರಮಾಣವನ್ನು ವಿಶ್ವ ಮಟ್ಟದ ತಾಂತ್ರಿಕತೆಯೊಂದಿಗೆ ಹೊಂದಾಣಿಕೆ ಹಾಗೂ ವಿಶ್ವ ಸಂಸ್ಥೆಯ ಸುಸ್ಥಿರ ಅಭಿವೃದ್ಧಿಯನ್ನು ಗುರಿಯಾಗಿರಿಸಿಕೊಂಡು ತರಬೇತಿ ಕಾರ್ಯಕ್ರಮದ ಮೂಲಕ ಕಲಿಕೆಯ ಪ್ರಮಾಣವನ್ನು ಹೆಚ್ಚಳಗೊಳಿಸಲಾಗಿದೆ. |
| (ಇ) ರಾಷ್ಟ್ರೀಯ ಶಿಕ್ಷಣ ನೀತಿಗೆ ಪೂರಕವಾಗಿ ಹಮ್ಮಿಕೊಳ್ಳಲಾದ ನೂತನ ಕಾರ್ಯಕ್ರಮಗಳೇನು? | ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಮೂಲಕ ಜಾರಿಗೊಳಿಸಲಾಗುವ ಯೋಜನೆಗಳನ್ನು ರಾಷ್ಟ್ರೀಯ ಶಿಕ್ಷಣ ನೀತಿಗೆ ಪೂರಕವಾಗಿ ರೂಪಿಸಿ ಅನುಷ್ಠಾನಗೊಳಿಸಲಾಗಿರುತ್ತದೆ. (ರಾಷ್ಟ್ರೀಯ ಶಿಕ್ಷಣ ನೀತಿಗೆ ಪೂರಕವಾಗಿ ಹಮ್ಮಿಕೊಳ್ಳಲಾದ ನೂತನ ಕಾರ್ಯಕ್ರಮಗಳ ವಿವರ **ಅನುಬಂಧ-1ರಲ್ಲಿ ನೀಡಲಾಗಿದೆ.)** |

ಸಂಖ್ಯೆ: **ಕೌಉಜೀಇ 24 ಕೌಗುಪ್ರ 2022**

(ಡಾ॥ ಸಿ.ಎನ್. ಅಶ್ವಥ್‌ನಾರಾಯಣ)
ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.

## <u>ಅನುಬಂಧ – I</u>

- ಮಹೀಂದ್ರಾ ಮತ್ತು ಮಹೀಂದ್ರಾ ಸಮೂಹ ಸಂಸ್ಥೆಯವರು ಮೆ: ನಾಂದಿ ಫೌಂಡೇಶನ್ ರವರ ಸಹಭಾಗಿತ್ವದಲ್ಲಿ 30,000 ಪದವಿ ವ್ಯಾಸಂಗ ಪೂರ್ಣಗೊಳಿಸುತ್ತಿರುವ ಹೆಣ್ಣು ಮಕ್ಕಳಿಗಾಗಿ Python, Digital Marketing, Soft Skills ಅಡಿಯಲ್ಲಿ ಉಚಿತ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಈಗಾಗಲೇ 11,000 ಹೆಣ್ಣುಮಕ್ಕಳು ಉಚಿತ ಕೌಶಲ್ಯಾಧಾರಿತ ತರಬೇತಿಯನ್ನು ಪಡೆದಿರುತ್ತಾರೆ. ಉಳಿದಂತೆ ತರಬೇತಿ ಕಾರ್ಯಕ್ರಮವು ಪ್ರಗತಿಯಲ್ಲಿರುತ್ತದೆ.

- <u>Talent Acceleration Programme (TAP) :</u> 2000 ಅಂತಿಮ ವರ್ಷದ BE / BSc / BCA ವಿದ್ಯಾರ್ಥಿಗಳಿಗೆ ಟ್ಯಾಲೆಂಟ್ ಆಕ್ಸಿಲರೇಶನ್ ಪ್ರೋಗ್ರಾಂ (TAP) ಮೂಲಕ ಭವಿಷ್ಯ ಕೌಶಲ್ಯಗಳಲ್ಲಿ ತರಬೇತಿ ನೀಡಲಾಗುತ್ತಿದೆ ಮತ್ತು ಅವರಿಗೆ ಸೂಕ್ತವಾದ ಉದ್ಯೋಗಗಳನ್ನು ಸಹ ಒದಗಿಸಲಾಗುತ್ತದೆ. ಈಗಾಗಲೇ 1520 ಅಭ್ಯರ್ಥಿಗಳು ತರಬೇತಿಯನ್ನು ಪಡೆದಿರುತ್ತಾರೆ.

- <u>ತರಬೇತುದಾರರಿಗೆ ತರಬೇತಿ</u> : ಸಂಕಲ್ಪ ಯೋಜನೆಯಡಿ 500 ಐಟಿಐ/ ಡಿಪ್ಲೋಮಾ/ ಪದವಿ ಉಪನ್ಯಾಸಕರಿಗೆ ಅಧುನಿಕ ಸಂಭೋಧನಾ ಕೌಶಲ್ಯ ಹಾಗೂ 21st Century Skills, Communicative English Skills ತರಬೇತಿ ನೀಡಲಾಗಿದೆ. ಕೌಶಲ್ಯ ತರಬೇತಿ ಸಂಸ್ಥೆಗಳ 100 ತರಬೇತುದಾರರಿಗೆ ಉನ್ನತ ಕೌಶಲ್ಯ ತರಬೇತಿ ನೀಡಲಾಗಿದೆ.

- <u>ಕಿರು ಉದ್ಯಮಶೀಲತೆ ಕಾರ್ಯಕ್ರಮ (NEP)</u> : ಹೆಸರೇ ಸೂಚಿಸುವಂತೆ ತಳಮಟ್ಟದ ಕಿರು ಉದ್ಯಮಿಗಳಿಗೆ ಕೌಶಲ್ಯಗಳನ್ನು ಕಲಿಯಲು ಮತ್ತು ವ್ಯವಹಾರ ಜ್ಞಾನವನ್ನು ಪಡೆಯಲು ಸಹಾಯ ಮಾಡುವ ಉದ್ಯಮಶೀಲತೆಯ ಕಾರ್ಯಕ್ರಮವಾಗಿದ್ದು, 200 ತಳ ಮಟ್ಟದ ಕಿರು ಉದ್ಯಮಿಗಳನ್ನು ಪ್ರೋತ್ಸಾಹಿಸುವ ಹಾಗೂ ಮಹಿಳೆಯರಿಗೆ ವಿಶೇಷ ಗಮನವನ್ನು ನೀಡುವ ಮೂಲಕ ತರಬೇತಿ ಮತ್ತು ಸೌಲಭ್ಯವನ್ನು ಒದಗಿಸುವ ಮೂಲಕ ಉದ್ಯಮಶೀಲತೆಯ ಪ್ರತಿಯೊಂದು ಹಂತದಲ್ಲೂ ಇರುವ ಹಲವಾರು ಸವಾಲುಗಳನ್ನು ಎದುರಿಸಲು ಸಹಾಯ ಮಾಡುವುದಾಗಿದೆ. ಈಗಾಗಲೇ 52 ಅಭ್ಯರ್ಥಿಗಳಿಗೆ ಕಿರು ಉದ್ಯಮಶೀಲತೆ ಕಾರ್ಯಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿರುತ್ತಾರೆ.

- <u>ಇ- ಕೌಶಲ್ಯ (Learning management System) :</u> ವಿಶ್ವಬ್ಯಾಂಕ್ ನೆರವಿನ ಕೇಂದ್ರ ಸಂಕಲ್ಪ ಯೋಜನೆಯಡಿ "Developing Learning Management System" (LMS) ಅಂತರ್ಜಾಲ ತಾಣವನ್ನು ಅಭಿವೃದ್ಧಿ ಪಡಿಸಲಾಗಿದ್ದು, ಈ ಮೂಲಕ 30 ಕೋರ್ಸ್‌ಗಳಲ್ಲಿ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ಭವಿಷ್ಯ ಕೌಶಲ್ಯ ಕುರಿತು ಪಠ್ಯಕ್ರಮವನ್ನು ಒದಗಿಸಲಾಗಿದೆ.

- <u>ಅಂಗ್ಲ ಭಾಷಾ ಪ್ರಯೋಗಾಲಯಗಳು</u> : ಪ್ರಯೋಗಾಲಯಗಳನ್ನು ಆಯ್ಕೆಯಾದ ಯಾದಗಿರಿ, ಕೊಪ್ಪಳ, ಚಿತ್ರದುರ್ಗ, ಚಾಮರಾಜನಗರ, ಮಂಗಳೂರು ಮತ್ತು ಮಂಡ್ಯ ಜಿಲ್ಲೆಗಳ ಜಿಟಿಟಿಸಿ, ಐಟಿಐ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಏಳು ಭಾಷಾ ಪ್ರಯೋಗಾಲಯಗಳನ್ನು ನಿರ್ಮಿಸಿ ಪ್ರತಿ ಪ್ರಯೋಗಾಲಯದಿಂದ 200 ಅಭ್ಯರ್ಥಿಗಳಂತೆ ಒಟ್ಟು 1400 ಅಭ್ಯರ್ಥಿಗಳಿಗೆ ತರಬೇತಿ ನೀಡಲು ಮತ್ತು ಭಾಷಾ ತರಬೇತಿಯನ್ನು ಒದಗಿಸಲು ಯೋಜನೆಯ ಅನುಷ್ಠಾನವು ಮುಕ್ತಾಯಗೊಂಡಿರುತ್ತದೆ.